52

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಸಿ.ವೇಣುಗೋಪಾಲ್ ಇವರು ನಿಯಮ-330ರಡಿಯಲ್ಲಿನ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರ ಉತ್ತರ

**ಪ್ರಶ್ನೆ:**

ಸಾರಿಗೆ ನೌಕರರು ಸರ್ಕಾರಿ ನೌಕರರು ಎಂದು ಘೋಷಿಸಿ. ಸಾರಿಗೆ ನೌಕರರಿಗೂ ಸರ್ಕಾರಿ ನೌಕರರಂತೆ ಎಲ್ಲಾ ಸೌಲಭ್ಯಗಳನ್ನು ನೀಡುವ ಬಗ್ಗೆ ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಉತ್ತರ:**

ರಾಜ್ಯ ರಸ್ತೆ ಸಾರಿಗೆ ನಿಗಮಗಳು, ರಸ್ತೆ ಸಾರಿಗೆ ನಿಗಮಗಳ ಕಾಯ್ದೆ-1950 ರಡಿ ಅಸ್ತಿತ್ವಕ್ಕೆ ಬಂದಿರುವ ಸರ್ಕಾರಿ ಸ್ವಾಮ್ಯದ ಸ್ವಾಯತ್ತ ಸಂಸ್ಥೆಗಳಾಗಿರುತ್ತವೆ. ಇದೇ ಮಾದರಿಯ ಬಹಳಷ್ಟು ಸರ್ಕಾರಿ ಸ್ವಾಮ್ಯದ ಸ್ವಾಯತ್ತ ಸಂಸ್ಥೆಗಳು ರಾಜ್ಯದಲ್ಲಿ ಅಸ್ತಿತ್ವದಲ್ಲಿ ಇರುತ್ತವೆ. ರಸ್ತೆ ಸಾರಿಗೆ ನಿಗಮಗಳ ನಿರ್ವಹಣೆ ಮತ್ತು ಸಿಬ್ಬಂದಿಗಳ ವೇತನ ಹಾಗೂ ಇತರೆ ಎಲ್ಲಾ ಆರ್ಥಿಕ ಸೌಲಭ್ಯಗಳನ್ನು ನಿಗಮಗಳು ತಮ್ಮ ಆಂತರಿಕ ಮೂಲಗಳಿಂದಲೇ ಭರಿಸಬೇಕಿದೆ.

ರಾಜ್ಯ ರಸ್ತೆ ಸಾರಿಗೆ ನೌಕರರನ್ನು ರಾಜ್ಯ ಸರ್ಕಾರಿ ನೌಕರರೆಂದು ಪರಿಗಣಿಸುವಂತೆ ನಿಗಮಗಳ ನೌಕರರ ಕೆಲವು ಒಕ್ಕೂಟಗಳು ಮತ್ತು ಸಂಘಗಳು ಇತ್ತೀಚಿನ ದಿನಗಳಲ್ಲಿ ಒತ್ತಾಯಿಸುತ್ತಿದ್ದು, ಈ ಬೇಡಿಕೆಯ ಕುರಿತು ಸಾಧಕ ಬಾಧಕಗಳು ಮತ್ತು ಕಾನೂನಾತ್ಮಕ ಹಾಗೂ ಆಡಳಿತಾತ್ಮಕ ವಿಚಾರಗಳ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಸಂಖ್ಯೆ: ಟಿಡಿ 88 ಟಿಸಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು